# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 131 (988)
2. ಸದಸ್ಯರ ಹೆಸರು : ಶ್ರೀ ಚಿದಾನಂದ ಎಂ. ಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 14.12.2023
4. ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಭದ್ರಾ ಮೇಲ್ದಂಡೆ ಯೋಜನೆಗೆ ಎಷ್ಟು ಹಣ ಮೀಸಲಿರಿಸಲಾಗಿದೆ; | ಭದ್ರಾ ಮೇಲ್ದಂಡೆ ಯೋಜನೆಗೆ 2023-24ನೇ ಸಾಲಿನಲ್ಲಿ ರೂ.2,723.00 ಕೋಟಿಗಳ ಅನುದಾನವನ್ನು ಮೀಸಲಿರಿಸಲಾಗಿರುತ್ತದೆ. |
| ಆ) | ಭದ್ರಾ ಮೇಲ್ದಂಡೆ ಯೋಜನೆಯ ಡಿ.ಪಿ.ಆರ್ ನಲ್ಲಿ ಹಣ ಎಷ್ಟಿದೆ; ಈ ಯೋಜನೆ ಯಾವ ಹಂತದಲ್ಲಿದೆ? | ಭದ್ರಾ ಮೇಲ್ದಂಡೆ ಯೋಜನೆಯ ರೂ.21,473.67 ಕೋಟಿಗಳ ಪುನರ್ ಪರಿಷ್ಕೃತ ಯೋಜನಾ ವರದಿಗೆ ದಿನಾಂಕ:16.12.2020 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.<br>ಯೋಜನೆಯ ಪ್ರಸ್ತುತ ಹಂತದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |

**ಸಂಖ್ಯೆ: ಜಸಂಇ 82 ಡಬ್ಲ್ಯೂಎಲ್ಎ 2023**

**(ಡಿ.ಕೆ.ಶಿವಕುಮಾರ್)**
**ಉಪ ಮುಖ್ಯಮಂತ್ರಿಗಳು**

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಚಿದಾನಂದ ಎಂ. ಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) ಇವರು ಪ್ರಸ್ತಾಪಿಸಿರುವ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 131(988) ಕ್ಕೆ ಅನುಬಂಧ**

**ಭದ್ರಾ ಮೇಲ್ದಂಡೆ ಯೋಜನೆಯ ವಿವಿಧ ಹಂತದ ವಿವರಗಳು:-**

1. ಹಂತ-1

- ಪ್ರಥಮ ಹಂತದಲ್ಲಿನ ತುಂಗಾ ನದಿಯಿಂದ ಭದ್ರಾ ಜಲಾಶಯಕ್ಕೆ ಲಿಫ್ಟ್ ಮಾಡುವ (ಪ್ಯಾಕೇಜ್-1) ಕಾಮಗಾರಿ ಪ್ರಗತಿಯಲ್ಲಿದೆ. ಇನ್ನುಳಿದಂತೆ ಭದ್ರಾ ಜಲಾಶಯದಿಂದ ಅಜ್ಜಂಪುರ ಸುರಂಗದವರೆಗೆ ನೀರನ್ನು ಲಿಫ್ಟ್ ಮಾಡುವ (ಪ್ಯಾಕೇಜ್-2) ಮತ್ತು ಅಜ್ಜಂಪುರ ಸುರಂಗ ನಿರ್ಮಾಣ ಮಾಡುವ (ಪ್ಯಾಕೇಜ್-3) ಕಾಮಗಾರಿಗಳು ಭೌತಿಕವಾಗಿ ಪೂರ್ಣಗೊಂಡಿದ್ದು, ಭದ್ರಾ ಜಲಾಶಯದಿಂದ ಅಜ್ಜಂಪುರ ಸುರಂಗದ ಮೂಲಕ 2019-2020 ನೇ ಸಾಲಿನಿಂದ ವಾಣಿ ವಿಲಾಸ ಸಾಗರ ಜಲಾಶಯಕ್ಕೆ ನೀರನ್ನು ಹರಿಸಲಾಗಿರುತ್ತದೆ.

2. ಹಂತ-2:

- **ತರೀಕೆರೆ ಏತ ನೀರಾವರಿ ಯೋಜನೆ**: ತರೀಕೆರೆ ತಾಲ್ಲೂಕಿನ 79 ಕೆರೆಗಳನ್ನು ತುಂಬಿಸಲು ಮತ್ತು 20,150 ಹೆಕ್ಟೇರ್ ಪ್ರದೇಶಕ್ಕೆ ಹನಿ ನೀರಾವರಿ ಕಲ್ಪಿಸುವ ರೂ.812.02 ಕೋಟಿಗಳ ಮೊತ್ತದ ಕಾಮಗಾರಿಗಳನ್ನು 2 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಂಡಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ. 2021-22ನೇ ಸಾಲ್ಲಿನಲ್ಲಿ ಎರಡನೇ ಪ್ಯಾಕೇಜ್‌ನ್ನು ಪರೀಕ್ಷಾರ್ಥ ಚಾಲನೆಗೊಳಿಸಿ, 9,892 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶವನ್ನು (Dry potential) ಸೃಜಿಸಲಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ 10,258 ಹೆಕ್ಟೇರ್ ಪ್ರದೇಶಕ್ಕೆ ಹನಿ ನೀರಾವರಿ ಸೌಲಭ್ಯ (Dry potential) ಸೃಜಿಸುವ ಗುರಿ ಹೊಂದಲಾಗಿದೆ.

- **ಚಿತ್ರದುರ್ಗ ಶಾಖಾ ಕಾಲುವೆ :** ಚೈನೇಜ್ 0.00 ಕಿ.ಮೀ ರಿಂದ 134.597 ಕಿ.ಮೀ ವರೆಗಿನ ಚಿತ್ರದುರ್ಗ ಶಾಖಾ ಕಾಲುವೆಯ ರೂ.1,719.42 ಕೋಟಿಗಳ ಮೊತ್ತದ ಕಾಮಗಾರಿಗಳನ್ನು 12 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಂಡಿದ್ದು, ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ.

- **ತುಮಕೂರು ಶಾಖಾ ಕಾಲುವೆ:** ಚೈನೇಜ್ 0.00 ಕಿ.ಮೀ ರಿಂದ 159.684 ಕಿ.ಮೀ ವರೆಗಿನ ತುಮಕೂರು ಶಾಖಾ ಕಾಲುವೆಯ ರೂ.1,135.20 ಕೋಟಿಗಳ ಮೊತ್ತದ ಕಾಮಗಾರಿಗಳನ್ನು 9 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಂಡಿದ್ದು, ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ.

**ಹನಿ ನೀರಾವರಿ** :

- ಚಿತ್ರದುರ್ಗ ಶಾಖಾ ಕಾಲುವೆಯಡಿ 40,749 ಹೆ. ಪ್ರದೇಶಕ್ಕೆ ಹನಿ ನೀರಾವರಿ ಸೌಲಭ್ಯ ಕಲ್ಪಿಸುವ ಹಾಗೂ ಕೆರೆಗಳನ್ನು ತುಂಬಿಸುವ ರೂ.1,848.44 ಕೋಟಿಗಳ ಮೊತ್ತದ ಕಾಮಗಾರಿಗಳನ್ನು 3 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.

- ತುಮಕೂರು ಶಾಖಾ ಕಾಲುವೆಯಡಿ 84,900 ಹೆ. ಪ್ರದೇಶಕ್ಕೆ ಹನಿ ನೀರಾವರಿ ಸೌಲಭ್ಯ ಕಲ್ಪಿಸುವ ಹಾಗೂ ಕೆರೆಗಳನ್ನು ತುಂಬಿಸುವ ರೂ.3,806.25 ಕೋಟಿಗಳ ಮೊತ್ತದ ಕಾಮಗಾರಿಗಳನ್ನು 9 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.

- ಜಗಳೂರು ಶಾಖಾ ಕಾಲುವೆಯಡಿ 13,200 ಹೆಕ್ಟೇರ್ ಕ್ಷೇತ್ರಕ್ಕೆ ಹನಿ ನೀರಾವರಿ ಕಲ್ಪಿಸುವ ಹಾಗೂ ಕೆರೆಗಳನ್ನು ತುಂಬಿಸುವ ರೂ.1,568.91 ಕೋಟಿಗಳ ಮೊತ್ತದ ಕಾಮಗಾರಿಗಳನ್ನು 2 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ.

- ಚಿತ್ರದುರ್ಗ ಶಾಖಾ ಕಾಲುವೆಯಡಿ ಬಾಕಿ ಉಳಿದ 66,516 ಹೆಕ್ಟೇರ್ ಪ್ರದೇಶಕ್ಕೆ ಹನಿ ನೀರಾವರಿ ಕಲ್ಪಿಸುವ ಕಾಮಗಾರಿಗಳಿಗೆ ಅಂದಾಜು ಪಟ್ಟಿಗಳನ್ನು ತಯಾರಿಸಲಾಗುತ್ತಿದ್ದು, ಅವಶ್ಯಕ ತೀರುವಳಿಗಳನ್ನು ಪಡೆದು ಅನುಷ್ಠಾನಕ್ಕಾಗಿ ಕೈಗೆತ್ತಿಕೊಳ್ಳಲು ಕ್ರಮವಹಿಸಲಾಗುತ್ತಿದೆ.

**ಕೆರೆ ತುಂಬಿಸುವ ಕಾಮಗಾರಿಗಳು:**

- **ಹೊಳಲ್ಕೆರೆ ತಾಲ್ಲೂಕಿನ ಕೆರೆಗಳನ್ನು ತುಂಬಿಸುವ ಕಾಮಗಾರಿ**: ಚಿತ್ರದುರ್ಗ ಶಾಖಾ ಕಾಲುವೆಯ ಚೈನೇಜ್ 28.42 ಕಿ.ಮೀ ನಲ್ಲಿ ಪ್ರಾರಂಭವಾಗುವ ಹೊಳಲ್ಕೆರೆ ತಾಲ್ಲೂಕಿನ ಕೆರೆಗಳನ್ನು ತುಂಬಿಸುವ ರೂ. 242.01 ಕೋಟಿಗಳ ಮೊತ್ತದ ಫೀಡರ್ ಕಾಮಗಾರಿಗಳನ್ನು 4 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.

- **ಚಳ್ಳಕೆರೆ, ಮೊಳಕಾಲ್ಮೂರು ಮತ್ತು ಪಾವಗಡ ತಾಲ್ಲೂಕಿನ ಕೆರೆಗಳನ್ನು ತುಂಬಿಸುವ ಕಾಮಗಾರಿ:** ಚಿತ್ರದುರ್ಗ ಶಾಖಾ ಕಾಲುವೆಯಿಂದ ಕವಲೊಡೆಯುವ ಪೈಪಲೈನ್ ಮೂಲಕ ಚಳ್ಳಕೆರೆ, ಮೊಳಕಾಲ್ಮೂರು ಮತ್ತು ಪಾವಗಡ ತಾಲ್ಲೂಕಿನ ಕೆರೆಗಳನ್ನು ತುಂಬಿಸುವ ರೂ.1,367.23 ಕೋಟಿಗಳ ಮೊತ್ತದ ಕಾಮಗಾರಿಗಳನ್ನು 4 ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.

- **ಶಿರಾ, ಹಿರಿಯೂರು ಹಾಗೂ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕೆರೆ ತುಂಬಿಸುವ ಕಾಮಗಾರಿ**: ತುಮಕೂರು ಶಾಖಾ ಕಾಲುವೆಯ ಚೈನೇಜ್ 159.180 ಕಿಮೀ ನಿಂದ ಕವಲೊಡೆಯುವ ಪೈಪ್‌ಲೈನ್ ಮೂಲಕ ಶಿರಾ ಹಾಗೂ ಹಿರಿಯೂರು ತಾಲ್ಲೂಕಿನ ಕೆರೆಗಳನ್ನು ತುಂಬಿಸಲು ರೂ.1,215.21 ಕೋಟಿಗಳ ಮೊತ್ತದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು ಕಾಮಗಾರಿ ಪ್ರಗತಿಯಲ್ಲಿದೆ. ತುಮಕೂರು ಶಾಖಾ ಕಾಲುವೆಯ ಸರಪಳಿ 113.329 ಕಿಮೀ ನಿಂದ ಪೈಪಲೈನ್ ಮೂಲಕ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕೆರೆಗಳನ್ನು ತುಂಬಿಸುವ ರೂ.73.48 ಕೋಟಿಗಳ ಮೊತ್ತದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು ಕಾಮಗಾರಿಯು ಪ್ರಗತಿಯಲ್ಲಿದೆ.

**ಭದ್ರಾ ಮೇಲ್ದಂಡೆ ಯೋಜನೆಗೆ ನವಂಬರ್-2023ರ ಅಂತ್ಯದವರೆಗೆ ಒಟ್ಟಾರೆಯಾಗಿ ರೂ.8,615.09 ಕೋಟಿಗಳ ಸಂಚಿತ ವೆಚ್ಚ ಮಾಡಲಾಗಿರುತ್ತದೆ.**

******